ಕೊರಟಗೆರೆ ತಾಲ್ಲೂಕಿನಲ್ಲಿ ಸಿವಿಲ್ ನ್ಯಾಯಾಲಯದ ಕಟ್ಟಡ ನಿರ್ಮಾಣ

2209(2712) ಶ್ರೀ ಚಿನ್ನಿಗಪ್ಪ ಸಿ. (ಕೊರಟಗೆರೆ) :— ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ತುಮಕೂರು ಜಿಲ್ಲೆ, ಕೊರಟಗೆರೆ ತಾಲ್ಲೂಕಿನ ನ್ಯಾಯಾಲಯವು ಹಳೆ ಕಟ್ಟಡದಲ್ಲಿಯೇ ನಡೆಯುತ್ತಿದ್ದು, ನ್ಯಾಯಾಲಯಕ್ಕೆ ಸ್ವಂತ ಕಟ್ಟಡವನ್ನು ನಿರ್ಮಿಲು ಸೂಕ್ತ ಕ್ರಮ ಜರುಗಿಸುವುದಾಗಿ ಸರ್ಕಾರ ಭರವಸೆ ನೀಡಿದ್ದರು, ಇದುವೆವಿಗೂ ಕ್ರಮ ಜರುಗಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಬಂದಿದ್ದಲ್ಲಿ ಈ ನ್ಯಾಯಾಲಯದ ಸ್ವಂತ ಕಟ್ಟಡ ನಿರ್ಮಾಣಕ್ಕೆ ಪ್ರಸಕ್ತ ಸಾಲಿನಲ್ಲಿಯೇ ಅನುದಾನ ಮಂಜೂರು ಮಾಡಿ, ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :—

ಅ) ಈ ಪ್ರಸ್ತಾವನೆಗೆ 2001-2002 ನೇ ಸಾಲಿನ ಆಯವಯ್ಯದಲ್ಲಿ ಹಣ ಒದಗಿಸದೇ ಇರುವುದರಿಂದ ಮುಂದಿನ ಸಾಲಿನ ಆಯವ್ಯಯದಲ್ಲಿ ಹಣ ಒದಗಿಸಿಕೊಂಡು ಪ್ರಸ್ತಾವನೆ ಸಲ್ಲಿಸುವಂತೆ ಕೋರಿ ಯೋಜನೆ ಮತ್ತು ನಕ್ಷೆಯನ್ನು ಹಿಂತಿರುಗಿಸಲಾಗಿದೆ.

ಆ) ಆಯವ್ಯಯದಲ್ಲಿ ಹಣ ಒದಗಿಸಿದ ನಂತರ ಉಚ್ಚ ನ್ಯಾಯಾಲಯದಿಂದ ಪ್ರಸ್ತಾವನೆ ಬಂದಲ್ಲಿ ಪರಿಶೀಲಿಸಲಾಗುವುದು.

ಅಥಣಿ ತಾಲ್ಲೂಕಿನಲ್ಲಿ ಸಾಂಸ್ಕೃತಿಕ ಭವನ ನಿರ್ಮಾಣ.

2210(3232) ಶ್ರೀ ಡೊಂಗರಗಾಂ ಶಹಜಹಾನ್ ಇಸ್ಮಾಯಿಲ್ (ಅಥಣಿ) :— ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಜ್ಯ ಸಚಿವೆಯರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬೆಳಗಾವಿ ಜಿಲ್ಲೆ, ಅಥಣಿ ತಾಲ್ಲೂಕಿನ ಮಹಾರಾಷ್ಟ್ರ ಗಡಿಭಾಗದ ಹಳ್ಳಿಗಳಲ್ಲಿ ಸಾಂಸ್ಕೃತಿಕ ಭವನದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಬಂದಿದ್ದಲ್ಲಿ, ಸರ್ಕಾರ ಈ ದಿಶೆಯಲ್ಲಿ ಯಾವ ಕ್ರಮ ಕೈಗೊಂಡಿದೆ?

ಶ್ರೀಮತಿ ರಾಣಿಸತೀಶ್ (ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಜ್ಯ ಸಚಿವೆಯರು) :—

ಅ) ಇಲ್ಲ

ಆ) ಸಾಂಸ್ಕೃತಿಕ ಭವನ ನಿರ್ಮಾಣ ಯೋಜನೆ ಇಲಾಖೆಯಲ್ಲಿಲ್ಲ.